# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 289 |
| 2 | ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ವಿಷಯ | ರೇಷ್ಮೆ ಇಲಾಖೆಯಲ್ಲಿನ ಸಿಬ್ಬಂದಿ ಕೊರತೆ ಕುರಿತು |
| 4 | ಉತ್ತರಿಸಬೇಕಾದ ದಿನಾಂಕ | 11-12-2024 |
| 5 | ಉತ್ತರಿಸುವವರು | ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು |
| | **ಪ್ರಶ್ನೆಗಳು** | **ಉತ್ತರಗಳು** |
| ಅ) | ರಾಜ್ಯದಲ್ಲಿ ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ರೇಷ್ಮೆ ಬೆಳೆಗಾರರಿಗೆ ಇಲಾಖೆಯಿಂದ ಸಿಗಬೇಕಾದ ಸೌಲಭ್ಯ ಹಾಗೂ ನೆರವುಗಳು ಸಕಾಲದಲ್ಲಿ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆದರೆ ಇಲಾಖೆಯ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗದಂತೆ ಹಾಲಿ ಲಭ್ಯವಿರುವ ಸಿಬ್ಬಂದಿಗಳ ಸೇವೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು (ಅಧಿಕಾರಿ / ಸಿಬ್ಬಂದಿಗಳನ್ನು ಹೆಚ್ಚುವರಿ ಪ್ರಭಾರದಲ್ಲಿ ರಿಸುವ ಮೂಲಕ) ಇಲಾಖಾ ಯೋಜನೆಗಳನ್ನು ಹಾಗೂ ಕಾರ್ಯಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಇಲಾಖೆಗೆ ಮಂಜೂರಾಗಿರುವ, ಹಾಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ವಿವರಗಳೇನು; | ಪ್ರಸ್ತುತ ರೇಷ್ಮೆ ಇಲಾಖೆಯಲ್ಲಿ 4299 ಮಂಜೂರಾಗಿರುವ ಹುದ್ದೆಗಳಿದ್ದು, ಈ ಪೈಕಿ 1169 ಹುದ್ದೆಗಳು ಭರ್ತಿಯಾಗಿದ್ದು, 3130 ಹುದ್ದೆಗಳು ಖಾಲಿ ಇರುತ್ತವೆ. |
| ಇ) | ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲು ಸರ್ಕಾರ ಕ್ರಮವಹಿಸಿದೆಯೇ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಎಲ್ಲಾ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುವುದು ? | 2022-23 ನೇ ಸಾಲಿನಲ್ಲಿ ರೇಷ್ಮೆ ವಿಸ್ತರಣಾಧಿಕಾರಿ ಸ್ಥಳೀಯ ವೃಂದ 06 ಮತ್ತು ಉಳಿದ ಮೂಲ ವೃಂದದ 72 ಹುದ್ದೆಗಳು ಒಟ್ಟು 78 ರೇಷ್ಮೆ ವಿಸ್ತರಣಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ವಿಧಾನದಿಂದ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಅಧಿಸೂಚನೆ ಹೊರಡಿಸಲಾಗಿರುತ್ತದೆ. ಈ ಪೈಕಿ ಸ್ಥಳೀಯ ವೃಂದದಲ್ಲಿ ಆಯ್ಕೆಯಾದ 04 ಅಭ್ಯರ್ಥಿಗಳಿಗೆ ದಿನಾಂಕ:29/06/2024 ರಂದು ನೇಮಕಾತಿ ಆದೇಶ ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಲಾಗಿರುತ್ತವೆ. ಉಳಿದ ಮೂಲ ವೃಂದದ 67 ಹುದ್ದೆಗಳಿಗೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನಾ ಪ್ರಕ್ರಿಯೆಯು ಪೂರ್ಣಗೊಳ್ಳುತ್ತಿದ್ದು, ಸದ್ಯದಲ್ಲೇ ನೇಮಕಾತಿ ಆದೇಶ ಹೊರಡಿಸಲಾಗುವುದು. |

| | | |
|---|---|---|
| | | 2023-24ನೇ ಸಾಲಿನಲ್ಲಿ ಗ್ರೂಪ್ "ಬಿ" ಮತ್ತು "ಸಿ" ವೃಂದದ ತಾಂತ್ರಿಕ ಹುದ್ದೆಗಳಾದ ರೇಷ್ಮೆ ಸಹಾಯಕ ನಿರ್ದೇಶಕರು-09, ರೇಷ್ಮೆ ನಿರೀಕ್ಷಕರು-81, ರೇಷ್ಮೆ ಪ್ರದರ್ಶಕರು-65 ಹಾಗೂ ರೇಷ್ಮೆ ಪ್ರವರ್ತಕರು-62 ಒಟ್ಟು 217 ತಾಂತ್ರಿಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.<br><br>ಪ್ರಸ್ತುತ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಹಾಗೂ ಇಲಾಖಾ ಪುನರ್ ಸಂಘಟನೆ ಪ್ರಕ್ರಿಯೆಯು ಪರಿಶೀಲನೆಯಲ್ಲಿದ್ದು, ಈ ಪ್ರಕ್ರಿಯೆ ಅಂತಿಮಗೊಂಡ ನಂತರ ಉಳಿದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು. |

ಸಂಖ್ಯೆ: ರೇಷ್ಮೆ 243 ರೇಕೃವಿ 2024

(ಕೆ.ವೆಂಕಟೇಶ್)
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು